ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ ,

ಕುಂದಾಪುರ

ಸಿ.ಸಿ. ನಂಬ್ರಃ 390/2018

ಚಾಸಾಃ12 ಪ್ರಾಸಾಃ4

ದಿನಾಂಕಃ 28.04.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ನಾಗರಾಜ ಕುಲಾಲ್ |
| ತಂದೆಯ ಹೆಸರು | : | ಕೊರಗ ಕುಲಾಲ್ |
| ವಯಸ್ಸು | : | 59 ವರ್ಷ |
| ಉದ್ಯೋಗ | : | ಎ ಎಸ್ ಐ |
| ವಾಸ ಸ್ಥಳ | : | ಕುಂದಾಪುರ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ.ರವರಿಂದಃ**

ನಾನು 2015 ರಿಂದ 2020ರವರೆಗೆ ಗಂಗೊಳ್ಳಿ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 09-12-2017 ರಂದು ಹಗಲು ಠಾಣಾ ಪ್ರಭಾರದಲ್ಲಿರುವಾಗ ಚಾಸಾ-1ರವರು ಠಾಣೆಗೆ ಬಂದು ನೀಡಿದ ಲಿಖಿತ ದೂರನ್ನು ಸ್ವೀಕರಿಸಿಕೊಂಡು ಆಧಾರದ ಮೇಲೆ ಠಾಣಾ ಅಪರಾಧ ಸಂಖ್ಯೆ 162/2017 ರಂತೆ ಪ್ರಕರಣ ದಾಖಲಿಸಿ ಪ್ರ.ವ.ವರದಿ ತಯಾರಿಸಿ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಯವರಿಗೆ ನಿವೇದಿಸಿಕೊಂಡಿರುತ್ತೇನೆ.

ನಂತರ ಮುಂದಿನ ಕಡತವನ್ನು ಚಾಸಾ-14 ರವರಿಗೆ ಹಸ್ತಾಂತರಿಸಿರುತ್ತೇನೆ.

ಸಾಕ್ಷಿ ನಿಪಿ-1 ರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಬಿ) ಎಂದು, ಪ್ರ.ವ.ವರದಿಯನ್ನು ನಿಪಿ-10 ಎಂದು, ಸಾಕ್ಷಿ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಾದ ಶ್ರೀ ಆರ್ ಎಂ ಎಸ್ ರವರಿಂದಃ**

ಈ ಪ್ರಕರಣದ ದೂರುದಾರರು ಚಾಸಾ-1ರವರು. ಮೃತರ ಆತನ ಚಿಕ್ಕಪ್ಪರಾಗಿರುತ್ತಾರೆ. ಚಾಸಾ-1ರವರು ಅಪಘಾತದ ಪ್ರತ್ಯಕ್ಷದರ್ಶಿ ಅಲ್ಲ. ನಿಪಿ-1 ರ ಕೈಬರಹ ಚಾಸಾ-1ರವರದ್ದಾಗಿರುತ್ತದೆ. ಅದನ್ನು ಠಾಣೆಯಲ್ಲಿ ಬಂದು ಬರೆದಿರುತ್ತಾರೆ. ಅಪಘಾತವಾದ 2 ಗಂಟೆಯ ನಂತರ ದೂರನ್ನು ನೀಡಿರುತ್ತಾರೆ. ನಿಪಿ-1ನ್ನು ನಮ್ಮ ಸಿಬ್ಬಂದಿಯವರೇ ಬರೆಯಿಸಿರುತ್ತಾರೆ ಎಂದರೆ ಸರಿಯಲ್ಲ. ಅದನ್ನು ನಾವು ಮತ್ತು ಚಾಸಾ-1ರವರು ಸೃಷ್ಟಿಸಿರುತ್ತೇವೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿದ ಎಲ್ಲಾ ವಿಚಾರಗಳು ಸುಳ್ಳು ಎಂದರೆ ಸರಿಯಲ್ಲ.

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**